**ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ (ಆರ್.ಜಿ.ಎಸ್.ಎ) ಯೋಜನೆಯಡಿ ಲಭ್ಯವಿರುವ ಅನುದಾನವನ್ನು ವಿವಿಧ ಚಟುವಟಿಕೆಗಳಿಗೆ ಬಿಡುಗಡೆಗೊಳಿಸಲು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಅಧ್ಯಕ್ಷತೆಯಲ್ಲಿ ಚರ್ಚಿಸಿ, ಅಂತಿಮಗೊಳಿಸಲು ದಿನಾಂಕ:19-08-2019ರಂದು ಅಪರಾಹ್ನ 3.00 ಗಂಟೆಗೆ ರಾಜ್ಯ ಕಾರ್ಯಕಾರಿ ಸಮಿತಿ ಸಭೆಯ ನಡವಳಿಗಳು.**

**ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳು:**

1. ಶ್ರೀ ಎಲ್.ಕೆ.ಅತೀಕ್, ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
2. ಶ್ರೀಮತಿ ಪ್ರಿಯಾಂಕಾ ಮೇರಿ ಫ್ರಾನ್ಸಿಸ್, ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
3. ಶ್ರೀ ವಿ.ನಾಗರಾಜ್, ನಿರ್ದೇಶಕರು, ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
4. ಶ್ರೀ ಎಂ.ಕೆ.ಕೆಂಪೇಗೌಡ, ಜಂಟಿ ನಿರ್ದೇಶಕರು, ಸಾಮಾಜಿಕ ಲೆಕ್ಕ ಪರಿಶೋಧನೆ ನಿರ್ದೇಶನಾಲಯ ಹಾಗೂ ಸಲಹೆಗಾರರು(ಪಂ.ರಾಜ್).
5. ಶ್ರೀ ಎ.ಎ.ಚಪ್ಪರಬಂದ, ಉಪ ಕಾರ್ಯದರ್ಶಿ, ಕೃಷಿ ಇಲಾಖೆ.
6. ಶ್ರೀಮತಿ ಜಿ.ಅನ್ನಪೂರ್ಣ, ಉಪ ಕಾರ್ಯದರ್ಶಿ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ.
7. ಶ್ರೀಮತಿ ಸಿ.ಎಸ್.ಲತಾದೇವಿ, ಜಂಟಿ ನಿರ್ದೇಶಕರು, ಯೋಜನೆ, ಕಾರ್ಯಕ್ರಮ ಸಂಯೋಜನೆ ಹಾಗೂ ಸಾಂಖ್ಯಿಕ ಇಲಾಖೆ.
8. ಶ್ರೀ ವಿ.ಎಂ.ಮಹೇಶ್, ಜಂಟಿ ನಿರ್ದೇಶಕರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
9. ಶ್ರೀಮತಿ ಸುರೇಖಾ ವಿಜಯಪ್ರಕಾಶ್, ಜಂಟಿ ನಿರ್ದೇಶಕರು(ICDS), ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಶಿಷ್ಟ ಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ.
10. ಶ್ರೀ ಸಂದೀಪ್ ಎಲ್., ಉಪ ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
11. ಶ್ರೀ ಸಿ.ಬಲರಾಮ್, ಶಾಖಾಧಿಕಾರಿ, ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಇಲಾಖೆ.
12. ಡಾ.ಗಣೇಶ್ ಪ್ರಸಾದ್, ಬೋಧಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
13. ಶ್ರೀ ಮಹಮ್ಮದ್ ಇಮ್ತಿಯಾಜ್, ರಾಜ್ಯ ಯೋಜನಾ ವ್ಯವಸ್ಥಾಪಕರು, ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

*****

ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವು ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆಯಡಿ ಬಿಡುಗಡೆಗೊಳಿಸಿರುವ ಅನುದಾನದಲ್ಲಿ ಪ್ರಸ್ತುತ ಲಭ್ಯವಿರುವ ಅನುದಾನವನ್ನು ರಾಜ್ಯ ಕಾರ್ಯಕಾರಿ ಸಮಿತಿ ಸಭೆಯ ಅನುಮೋದನೆ ಪಡೆದು ಉಪಯೋಗಿಸಿಕೊಳ್ಳಲು ಅನುವಾಗುವಂತೆ ವಿವಿಧ ಚಟುವಟಿಕೆಗಳನ್ನು ಗುರುತಿಸುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು.

ಹಿಂದಿನ ಸಾಮರ್ಥ್ಯಾಭಿವೃದ್ಧಿ-ಪಂಚಾಯತಿ ಸಶಕ್ತೀಕರಣ ಅಭಿಯಾನ ಯೋಜನೆಯನ್ನು ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆಯಲ್ಲಿ ವಿಲೀನಗೊಳಿಸಲಾಗಿದೆ. ರಾಜ್ಯ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡ ನಿರ್ಮಾಣ ಮಾಡುವ ಉದ್ದೇಶಕ್ಕಾಗಿ ಸಾಮರ್ಥ್ಯಾಭಿವೃದ್ಧಿ-ಪಂಚಾಯತಿ ಸಶಕ್ತೀಕರಣ ಅಭಿಯಾನ ಯೋಜನೆಯಡಿ 2015-16ನೇ ಮತ್ತು 2017-18ನೇ ಸಾಲಿನಲ್ಲಿ ಕೇಂದ್ರ ಸರ್ಕಾರವು ತನ್ನ ಪಾಲಿನ ಅನುದಾನ ಕ್ರಮವಾಗಿ ರೂ.25.00ಲಕ್ಷ ಹಾಗೂ ರೂ.75.00ಲಕ್ಷಗಳು ಒಟ್ಟು ರೂ.100.00ಲಕ್ಷಗಳನ್ನು ಬಿಡುಗಡೆಗೊಳಿಸಿದೆ. ಇದರೊಂದಿಗೆ ಸಾಮರ್ಥ್ಯಾಭಿವೃದ್ಧಿ-ಪಂಚಾಯತಿ ಸಶಕ್ತೀಕರಣ ಅಭಿಯಾನ ಯೋಜನೆಯಡಿ 2016-17ನೇ ಸಾಲಿನಲ್ಲಿ ಕೇಂದ್ರ ಸರ್ಕಾರವು ಬಿಡುಗಡೆಗೊಳಿಸಿದ್ದ ರೂ.1508.00ಲಕ್ಷಗಳ ಅನುದಾನಕ್ಕೆ ಎದುರಾಗಿ ರಾಜ್ಯದ ಪಾಲಿನ ಮೊತ್ತ ರೂ.500.00ಲಕ್ಷಗಳನ್ನು ಸೇರಿಸಿ ಒಟ್ಟಾರೆ

ಅನುದಾನದ ಮೊತ್ತ ಅಂದಾಜು ರೂ.600.00ಲಕ್ಷಗಳ ವೆಚ್ಚದಲ್ಲಿ ಬೆಂಗಳೂರು ನಗರ ಜಕ್ಕೂರಿನಲ್ಲಿರುವ ಮಹಾತ್ಮಗಾಂಧಿ ಗ್ರಾಮೀಣ ಇಂಧನ ಅಭಿವೃದ್ಧಿ ಸಂಸ್ಥೆ (MGIRED) ಆವರಣದ ಗುರುತಿಸಲಾದ ನಿವೇಶನದಲ್ಲಿ ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡವನ್ನು ನಿರ್ಮಿಸಲು ಉದ್ದೇಶಿಸಲಾಗಿದೆ. ಈ ಪ್ರಸ್ತಾವನೆಯನ್ನು ಸಭೆಯಲ್ಲಿ ಚರ್ಚಿಸಲಾಯಿತು. ಸಭೆಯು ಉದ್ದೇಶಿತ ಕಟ್ಟಡದ ವಿನ್ಯಾಸವನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಮುಖಾಂತರ ಮುಖ್ಯ ವಾಸ್ತುಶಿಲ್ಪಿ, ಲೋಕೋಪಯೋಗಿ ಇಲಾಖೆ ಇವರಿಂದ ಪಡೆದುಕೊಳ್ಳುವಂತೆ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು ಸೂಚಿಸಿದರು.

ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 28 ಜಿಪಸ 2019, ದಿನಾಂಕ:05-03-2019ರನ್ವಯ ಸದರಿ ಯೋಜನೆಯಡಿ ನಿರ್ಮಿಸಲಾದ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡಗಳಿಗೆ ತಲಾ ರೂ.50.00ಲಕ್ಷಗಳ ಹಾಗೆ ಒಟ್ಟಾರೆ ರೂ1000.00ಲಕ್ಷಗಳನ್ನು ಬಿಡುಗಡೆಗೊಳಿಸುವುದು ಹಾಗೂ ಮುಕ್ತಾಯಗೊಂಡಿರುವ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡಗಳನ್ನು ಆಯಾ ಜಿಲ್ಲಾ ಪಂಚಾಯತಿಗಳು ವಶಕ್ಕೆ ಪಡೆದು ಹೆಚ್ಚುವರಿಯಾಗಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ರೂ.50.00ಲಕ್ಷಗಳ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ಅನುದಾನವನ್ನು ಬಿಡುಗಡೆಗೊಳಿಸುವುದಾಗಿ ಆದೇಶಿಸಲಾಗಿತ್ತು. ಸದರಿ ಆದೇಶವನ್ನು ಈ ಕೆಳಕಂಡ ಕಂಡಿಕೆಯಲ್ಲಿ ತಿಳಿಸಿರುವ ಅಂಶಗಳಂತೆ ಮಾರ್ಪಡಿಸಿ, ತಿದ್ದುಪಡಿ ಆದೇಶವನ್ನು ಹೊರಡಿಸುವಂತೆ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರು ಸೂಚಿಸಿದರು.

ಈ ಹಿನ್ನೆಲೆಯಲ್ಲಿ ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ/ಸಾಮರ್ಥ್ಯಾಭಿವೃದ್ಧಿ-ಪಂಚಾಯತಿ ಸಶಕ್ತೀಕರಣ ಅಭಿಯಾನ ಯೋಜನೆಯಡಿ ಅನುಮೋದಿತ ಚಟುವಟಿಕೆಯಾದ ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡಗಳನ್ನು ಪ್ರತಿ ಜಿಲ್ಲೆಗೆ ಒಂದರಂತೆ ನಿರ್ಮಿಸಲು ಅವಕಾಶವಿದ್ದು, ಅದರಂತೆ, ಒಟ್ಟು 30 ಡಿ.ಪಿ.ಆರ್.ಸಿ.ಗಳ ಪೈಕಿ 22 ಕಟ್ಟಡಗಳು ಮುಕ್ತಾಯಗೊಂಡಿರುತ್ತವೆಂದು ನಿರ್ಮಾಣದ ಅನುಷ್ಠಾನ ಏಜೆನ್ಸಿಯಾದ ಕರ್ನಾಟಕ ಗ್ರಾಮೀಣ ಮೂಲಭೂತ ಸೌಲಭ್ಯ ಅಭಿವೃದ್ಧಿ ನಿಗಮವು ತಿಳಿಸಿದೆ ಎಂದು ಸಭೆಯ ಗಮನಕ್ಕೆ ತರಲಾಯಿತು. ಸದರಿ ಮುಕ್ತಾಯಗೊಂಡ ಹಾಗೂ ಆಯಾ ಜಿಲ್ಲಾ ಪಂಚಾಯತಿಗಳು ವಶಕ್ಕೆ ಪಡೆದುಕೊಂಡಿರುವ 11 ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡ(ದಾವಣಗೆರೆ, ಚಿತ್ರದುರ್ಗ, ಚಿಕ್ಕಬಳ್ಳಾಪುರ, ವಿಜಯಪುರ, ಶಿವಮೊಗ್ಗ, ರಾಮನಗರ, ಬಳ್ಳಾರಿ, ಬೆಂಗಳೂರು ನಗರ, ಬಾಗಲಕೋಟೆ, ಚಿಕ್ಕಮಗಳೂರು ಹಾಗೂ ಹಾಸನ)ಗಳಿಗೆ ಹೆಚ್ಚುವರಿಯಾಗಿ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಸಲುವಾಗಿ ತಲಾ ರೂ.50.00ಲಕ್ಷಗಳಂತೆ ಒಟ್ಟು ರೂ.550.00ಲಕ್ಷಗಳನ್ನು ನೇರವಾಗಿ ಆಯಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಬಿಡುಗಡೆಗೊಳಿಸಲು ತೀರ್ಮಾನಿಸಲಾಯಿತು. ಇನ್ನುಳಿದ ಮುಕ್ತಾಯಗೊಂಡಿರುವ ಹಾಗೂ ಜಿಲ್ಲಾ ಪಂಚಾಯತಿಗಳ ವಶಕ್ಕೆ ಪಡೆಯದೇ ಇರುವ 11 ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡಗಳಾದ ಹಾವೇರಿ, ಬೆಳಗಾವಿ, ಕಾರವಾರ, ತುಮಕೂರು, ಬೀದರ್, ಕಲಬುರಗಿ, ಯಾದಗಿರಿ, ಕೊಡಗು, ಮೈಸೂರು, ಚಾಮರಾಜನಗರ ಹಾಗೂ ಉಡುಪಿ ಜಿಲ್ಲೆಗಳಿಗೆ ತಲಾ ರೂ.25.00ಲಕ್ಷಗಳ ಹಾಗೆ ಒಟ್ಟು ರೂ.275.00ಲಕ್ಷಗಳನ್ನು ನೇರವಾಗಿ ಆಯಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಬಿಡುಗಡೆಗೊಳಿಸಲು ನಿರ್ಧರಿಸಲಾಯಿತು.

2018-19ನೇ ಸಾಲಿನ ಕೇಂದ್ರ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವು ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆಯಡಿ ಉನ್ನತಾಧಿಕಾರಿ ಸಮಿತಿಯು ಅನುಮೋದಿಸಿರುವಂತೆ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರು ಇವರು ರಾಜ್ಯ ಸರ್ಕಾರಕ್ಕೆ ನೀಡಿರುವ ರೂ.132.00ಲಕ್ಷಗಳ ಅನುದಾನವನ್ನು ರಾಜ್ಯ ಮಟ್ಟದ ಇ-ಎನೆಬಲ್‌ಮೆಂಟ್ ಘಟಕಕ್ಕೆ ಬಿಡುಗಡೆಗೊಳಿಸಲು ತೀರ್ಮಾನಿಸಲಾಯಿತು.

2014-15ನೇ ಸಾಲಿನಲ್ಲಿ ಆರ್.ಜಿ.ಪಿ.ಎಸ್.ಎ ಯೋಜನೆಯಡಿಯಲ್ಲಿ ಕೇಂದ್ರ ಕಾರ್ಯಕಾರಿ ಸಮಿತಿಯಿಂದ ಅನುಮೋದನೆಗೊಂಡಿದ್ದ ಚಟುವಟಿಕೆಯಾದ **'ಗ್ರಾಮ ಪಂಚಾಯತಿಗಳಿಗೆ ಆಡಳಿತಾತ್ಮಕ ಹಾಗೂ ತಾಂತ್ರಿಕ ಸಹಾಯಾನುದಾನ'** ಎಂಬುದರಡಿಯಲ್ಲಿ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಡಾಟಾ ಎಂಟ್ರಿ ಆಪರೇಟರ್‌ಗಳು, ಎಲ್ಲಾ ಹೋಬಳಿಗಳಿಗೆ ತಾಂತ್ರಿಕ ಅಧಿಕಾರಿ ಹಾಗೂ ಜಿಲ್ಲಾ ಮಟ್ಟದಲ್ಲಿ ಸಹಾಯಕ ಡಿ.ಪಿ.ಎಂ.ಯು ಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ತೆಗೆದುಕೊಳ್ಳಲು ರೂ.5.00 ಕೋಟಿಗಳ ಮೀಸಲಿಟ್ಟ ಅನುದಾನಕ್ಕೆ ಟೆಂಡರ್‌ನ್ನು ಕರೆಯಲಾಗಿತ್ತು. ಆದರೆ, ಈ ಚಟುವಟಿಕೆಗೆ

ಕೇಂದ್ರವು ಅನುದಾನವನ್ನು ಒದಗಿಸುವುದಿಲ್ಲವೆಂದು ತಿಳಿಸಿದ ಹಿನ್ನೆಲೆಯಲ್ಲಿ ಸದರಿ ಟೆಂಡರ್‌ನ್ನು ರದ್ದುಗೊಳಿಸಲಾಗಿರುತ್ತದೆ. ಸದರಿ ಮೀಸಲಿರಿಸಲಾಗಿದ್ದ ಅನುದಾನವು ರಾಜ್ಯ ನೋಡಲ್ ಬ್ಯಾಂಕ್‌ನಲ್ಲಿ ಜಮೆ ಇರುತ್ತದೆ. ಸದರಿ ಅನುದಾನವನ್ನು ರಾಜ್ಯದ ಎಲ್ಲಾ ತಾಲ್ಲೂಕುಗಳಲ್ಲಿ ಗ್ರಾಮ ಸ್ವರಾಜ್ ಯೋಜನೆಯಡಿಯಲ್ಲಿ ನಿರ್ಮಿಸಲಾಗಿರುವ ಪ್ರತಿ ಸಾಮರ್ಥ್ಯಾಭಿವೃದ್ಧಿ ಭವನಗಳಿಗೆ ಆಧುನಿಕ ಮೂಲಭೂತ ಪಾರೋಪಕರಣಗಳನ್ನು ಒದಗಿಸುವ ಉದ್ದೇಶದ ಹಿನ್ನೆಲೆಯಲ್ಲಿ 54" ಇಂಚಿನ ಸ್ಮಾರ್ಟ್ LED TV ಹಾಗೂ ಒಂದು ಗಣಕಯಂತ್ರವನ್ನು ಜಮ್‌ಪೋರ್ಟಲ್ ಮೂಲಕ ತೆಗೆದುಕೊಳ್ಳಲು ಪ್ರತಿ ತಾಲ್ಲೂಕಿಗೆ ರೂ.1.00ಲಕ್ಷಗಳನ್ನು ಆಯಾ ಜಿಲ್ಲಾ ಪಂಚಾಯತಿಗಳ ಮುಖಾಂತರ ಬಿಡುಗಡೆಗೊಳಿಸುವುದು. ಈ ಪಾರೋಪಕರಣಗಳಿಗೆ ಸಂಬಂಧಿಸಿದ Specification ಗಳನ್ನು ತದನಂತರ ನಿರ್ದೇಶಕರು, ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರಿಂದ ನೀಡುವಂತೆ ತೀರ್ಮಾನಿಸಲಾಯಿತು. ಆದರೆ, ಈ ಅಂಶಕ್ಕೆ ಸಂಬಂಧಿಸಿದಂತೆ ಇನ್ನು ಹೆಚ್ಚುವರಿಯಾಗಿ ಯಾವ ಚಟುವಟಿಕೆಗೆ ಅನುದಾನವನ್ನು ಒದಗಿಸಬೇಕೆಂಬುದರ ಬಗ್ಗೆ ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಗಮನಕ್ಕೆ ತಂದು ತೀರ್ಮಾನ ಕೈಗೊಳ್ಳುವಂತೆ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರು ಸಭೆಗೆ ಸೂಚಿಸಿದರು.

ಕೇಂದ್ರ ಪುರಸ್ಕೃತ ಯೋಜನೆಯಾದ ಸಾಮರ್ಥ್ಯಾಭಿವೃದ್ಧಿ-ಪಂಚಾಯತಿ ಸಶಕ್ತೀಕರಣ ಅಭಿಯಾನ ಯೋಜನೆಯಡಿ ಕೇಂದ್ರ ಸರ್ಕಾರವು ತನ್ನ ಪಾಲಿನ ಸಂಪೂರ್ಣ ಅನುದಾನವನ್ನು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರು ಇವರಿಗೆ 2017-18ನೇ ಸಾಲಿನಲ್ಲಿ 1ನೇ ಕಂತಿನ ಅನುದಾನ ರೂ.1839.53ಲಕ್ಷಗಳು ಹಾಗೂ 2ನೇ ಕಂತಿನ ಅನುಧಾನ ರೂ.2268.39 ಲಕ್ಷಗಳನ್ನು ನೇರವಾಗಿ ಬಿಡುಗಡೆಗೊಳಿಸಿರುತ್ತದೆ. ಈ ಅನುದಾನಗಳಿಗೆ ಎದುರಾಗಿ ಕ್ರಮವಾಗಿ ಸೆಳೆಯಲಾದ ರಾಜ್ಯದ ಪಾಲಿನ ಅನುದಾನ ರೂ.6,13,18,000/-ಗಳು ಹಾಗೂ ರೂ.7,56,13,000/- ಗಳು ಒಟ್ಟಾರೆ, ರೂ.13,69,31,000/-ಗಳು ರಾಜ್ಯ ನೋಡಲ್ ಬ್ಯಾಂಕ್‌ನಲ್ಲಿ ಜಮೆ ಇರುತ್ತದೆ. ಸದರಿ ಮೊತ್ತವನ್ನು ಕೇಂದ್ರ ಸರ್ಕಾರದ ನಿರ್ದೇಶನದ ಮೇರೆಗೆ ರಾಜ್ಯ ಕಾರ್ಯಕಾರಿ ಸಮಿತಿ ಸಭೆಯಿಂದ ಅನುಮೋದನೆ ಪಡೆದು ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆಯ ಮಾರ್ಗಸೂಚಿಯನುಸಾರ ರಾಜ್ಯ ಸರ್ಕಾರದ ವಿವೇಚನೆಯ ಮೇರೆಗೆ ವೆಚ್ಚ ಮಾಡಬಹುದಾಗಿರುತ್ತದೆ. ಈ ಸಂಬಂಧವಾಗಿ ರಾಜ್ಯ ಮಟ್ಟದಲ್ಲಿ ನಿರ್ದೇಶಕರು(ಪಂ.ರಾಜ್-1), ನಿರ್ದೇಶಕರು(ಪಂ.ರಾಜ್-2), ನಿರ್ದೇಶಕರು, ಇ-ಆಡಳಿತ, ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರು, ಜಂಟಿ ನಿರ್ದೇಶಕರು, ಸಾಮಾಜಿಕ ಲೆಕ್ಕ ಪರಿಶೋಧನೆ ನಿರ್ದೇಶನಾಲಯ ಹಾಗೂ ಸಲಹೆಗಾರರು(ಪಂ.ರಾಜ್) ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರುಗಳನ್ನೊಳಗೊಂಡಂತೆ ಒಂದು ಸಮಿತಿಯನ್ನು ರಚಿಸುವಂತೆ ಸೂಚಿಸಿದರು. ಸದರಿ ಸಮಿತಿಯು ರೂ.13,69,31,000/-ಗಳಿಗೆ ಒಂದು ಕ್ರಿಯಾಯೋಜನೆಯನ್ನು ಸಿದ್ದಪಡಿಸಿ, ಮುಂದಿನ ಸಭೆಯಲ್ಲಿ ಮಂಡಿಸುವಂತೆ ಸೂಚಿಸಿದರು.

ಅಂತಿಮವಾಗಿ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸಂಖ್ಯೆ:ಗ್ರಾಅಪ 138 ಜಿಪಸ 2017

(ಎಲ್.ಕೆ.ಅತೀಕ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಹಾಗೂ ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.

4. ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಹಂತ-5, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಶಿಷ್ಠ ಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.
8. ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ.
11. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.

**ಪ್ರತಿಯನ್ನು ಮಾಹಿತಿಗಾಗಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ನಿರ್ದೇಶಕರು(ಪಂ.ರಾಜ್-1), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಆಪ್ತ ಸಹಾಯಕಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ನಿರ್ದೇಶಕರು(ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.